Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 09-11-2022

**ಪತ್ರಿಕಾ ಪ್ರಕಟಣೆ:**

# ಉಪನ್ಯಾಸ ಕಾರ್ಯಕ್ರಮ ಯಶಸ್ವಿ

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದಲ್ಲಿ ಸಿವಿಲ್ ಇಂಜಿನಿಯರಿಂಗ್ ಕ್ಷೇತ್ರದಲ್ಲಿರುವ ಉದ್ಯೋಗಾವಕಾಶಗಳ ಬಗ್ಗೆ ಅರಿವು ಮೂಡಿಸುವ ಒಂದು ದಿನದ ಉಪನ್ಯಾಸ ಕಾರ್ಯಕ್ರಮವು ನವೆಂಬರ್ 9 ರಂದು ನಡೆಯಿತು. ಮಹಾವಿದ್ಯಾಲಯದ ಸಿವಿಲ್ ವಿಭಾಗದ ಹಳೆಯ ವಿದ್ಯಾರ್ಥಿಯಾದ ಶ್ರೀ. ಅಭಿಷೇಕ್ ಜಿ ಕೆ ಅವರು ಸಿವಿಲ್ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ದ್ವಿತೀಯ,ತೃತೀಯ ಹಾಗೂ ನಾಲ್ಕನೇ ವರ್ಷದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತ, ಸರಕಾರಿ ಹಾಗೂ ಖಾಸಗಿ ಕ್ಷೇತ್ರಗಳಲ್ಲಿ ಸಿವಿಲ್ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗಿರುವ ಉದ್ಯೋಗಾವಕಾಶಗಳು ಹಾಗೂ ಔದ್ಯಮಶೀಲರಾಗಲು ಬೇಕಾಗುವ ಮಾಹಿತಿಯನ್ನು ನೀಡಿದರು. ದೇಶ ಹಾಗೂ ವಿದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ಇರುವ ಅವಕಾಶಗಳ ಸ್ಪಷ್ಟ ಚಿತ್ರಣ ನೀಡುತ್ತ, ಬೇಕಾಗುವ ಪೂರ್ವ ಸಿದ್ಧತೆಗಳನ್ನು ಸಹ ತಿಳಿಸಿದರು.2014 ರಿಂದ 2018 ವರೆಗೆ ಮಹಾವಿದ್ಯಾಲಯದ ಸಿವಿಲ್ ವಿಭಾಗದಲ್ಲಿ ವ್ಯಾಸಂಗ ಮಾಡಿದ್ದ ಇವರು ಬೆಂಗಳೂರಿನಲ್ಲಿರುವ ಅಟಕಿನ್ಸ್ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ ಅವರು ಸಿವಿಲ್ ವಿಭಾಗದಲ್ಲಿ ಉತ್ತಮ ಜ್ಞಾನ ಹೊಂದಿ ಉದ್ಯಮಶೀಲರಾಗಿ ಹೊರಹೊಮ್ಮುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸಿವಿಲ್ ವಿಭಾಗದ ಮುಖ್ಯಸ್ಥರಾದ ಪ್ರೊ. ಹರ್ಷ ಜಾಧವ ಸ್ವಾಗತಿಸಿದರು. ಪ್ರೊ. ಪಾರ್ವತಿ ಓಣಿ ಸಂಪನ್ಮೂಲ ವ್ಯಕ್ತಿಗಳ ಕಿರುಪರಿಚಯ ಮಾಡಿದರು. ಡಾ. ಆಶಿಕ್ ಬಳ್ಳಾರಿ ವಂದಿಸಿದರು. ಕುಮಾರಿ. ಸೃಷ್ಟಿ ಹೆಚ್ ನಿರೂಪಿಸಿದರು. ಸಿವಿಲ್ ವಿಭಾಗದ ವಿದ್ಯಾರ್ಥಿಗಳು ಹಾಗೂ ಬೋಧಕ ಸಿಬ್ಬಂದಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

**Principal**
**KLS Vishwanathrao Deshpande**
**Institute of Technology, Haliyal**


KLS VDIT, Haliyal
KLS VDIT